# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಶ್ರೀ ಜಗನ್ನಾಥ ಮಜಗೆ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಔರಾದ್ ಇವರ ವಿರುದ್ಧ ದಾಖಲಾಗಿರುವ ದಾಳಿ ಪ್ರಕರಣ - ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ - ಆದೇಶ.

**ಓದಲಾಗಿದೆ:-** ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ಪತ್ರ ಸಂಖ್ಯೆ ಎಸಿಬಿ/ಬೀದರ್/ ಮೊ.ಸಂ.02/ 2016 ದಿನಾಂಕ 03.11.2016.

*****

**ಪ್ರಸ್ತಾವನೆ:**

ಅಪರ ಪೊಲೀಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಮೇಲೆ ಓದಲಾದ ದಿನಾಂಕ 03.11.2016ರ ಪತ್ರದ ಜೊತೆ ಪ್ರಥಮ ವರ್ತಮಾನ ವರದಿ ಹಾಗೂ ತನಿಖಾಧಿಕಾರಿಗಳ ಪ್ರಾಥಮಿಕ ತನಿಖಾ ವರದಿಯ ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಶ್ರೀ ಜಗನ್ನಾಥ ಮಜಗೆ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಔರಾದ್, ಬೀದರ್ ಜಿಲ್ಲೆ ಇವರು ತಮ್ಮ ಎಲ್ಲಾ ಬಲ್ಲ ಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆಂಬ ಬಗ್ಗೆ ನಂಬಲರ್ಹ ಮಾಹಿತಿಯ ಆಧಾರದ ಮೇರೆಗೆ ಇವರ ವಿರುದ್ಧ ಬೀದರ್ ಭ್ರಷ್ಟಾಚಾರ ನಿಗ್ರಹ ದಳ ಪೊಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ 02/2016ಅನ್ನು ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ಕಲಂ 13(1)(ಇ) ಸಹವಾಚನ 13(2)ರ ರೀತ್ಯಾ ದಿನಾಂಕ 03.10.2016ರಂದು ದಾಖಲಿಸಿಕೊಂಡು ದಿನಾಂಕ 04.10.2016ರಂದು ಶ್ರೀ ಜಗನ್ನಾಥ ಮಜಗೆ ಇವರ ವಾಸದ ಮನೆ, ಕಛೇರಿ ಹಾಗೂ ಅವರಿಗೆ ಸಂಬಂಧಿಸಿದ ಮನೆ ಮತ್ತು ಕಛೇರಿಗಳನ್ನು ಶೋಧನೆ ಮಾಡಿದ್ದು, ಶೋಧನಾ ಸಂದರ್ಭದಲ್ಲಿ ಕಂಡುಬಂದಿರುವ ಚರ ಮತ್ತು ಸ್ಥಿರಾಸ್ತಿಗಳ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಿ, ಆಪಾದಿತರು ತಮ್ಮ ಬಲ್ಲ ಮೂಲಗಳಿಗಿಂತ ಹೆಚ್ಚಿನ ಆದಾಯ ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿಯವರನ್ನು ಕೂಡಲೇ ಅಮಾನತ್ತಿನಲ್ಲಿಡುವಂತೆ ಹಾಗೂ ಸದರಿಯವರ ಲೀನ್ (ಸ್ಥಾನ) ವನ್ನು ಬೇರೆ ಕಡೆಗೆ ವರ್ಗಾಯಿಸುವಂತೆ ಕೋರಿರುತ್ತಾರೆ.

ಸರ್ಕಾರವು ಭ್ರಷ್ಟಾಚಾರ ನಿಗ್ರಹ ದಳದ ಅಪರ ಪೊಲೀಸ್ ಮಹಾ ನಿರ್ದೇಶಕರ ಪತ್ರ ಹಾಗೂ ಅದಕ್ಕೆ ಲಗತ್ತಿಸಿ ಕಳುಹಿಸಿದ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರು ಪರಿಶೀಲನಾ ಅವಧಿಯಲ್ಲಿ ಅರ್ಜಿಸಿರುವ ಆದಾಯ ಹಾಗೂ ಚರ ಮತ್ತು ಸ್ಥಿರಾಸ್ತಿಯ ಒಟ್ಟು ಮೌಲ್ಯ ಮತ್ತು ಈ ಅವಧಿಯಲ್ಲಿ ಮಾಡಿರುವ ವೆಚ್ಚ ಇತ್ಯಾದಿ ವಿವರಗಳು ಈ ಕೆಳಕಂಡಂತಿರುತ್ತವೆ:-

| ಕ್ರ.ಸಂ. | ವಿವರಗಳು | ಮೌಲ್ಯ ರೂ.ಗಳಲ್ಲಿ |
|---|---|---|
| 1. | ಶೋಧನಾ ಅವಧಿಯಲ್ಲಿ ಪತ್ತೆಯಾದ ಸ್ಥಿರ ಮತ್ತು ಚರಾಸ್ತಿಗಳ ಒಟ್ಟು ಬೆಲೆ | 86,25,000/- |
| 2. | ಹೆಚ್ಚುವರಿಯಾಗಿ ದೊರೆತ ಸ್ಥಿರ ಮತ್ತು ಚರಾಸ್ತಿ, ಗೃಹ ಬಳಕೆ ವಸ್ತುಗಳ ಒಟ್ಟು ಬೆಲೆ. | 89,47,437/- |

| | | |
|---|---|---|
| 3. | ಕೌಟುಂಬಿಕ ನಿರ್ವಹಣೆ ಮತ್ತು ಮಕ್ಕಳ ವಿದ್ಯಾಭ್ಯಾಸ, ಮದುವೆ ಇತ್ಯಾದಿಗಳಿಗೆ ಮಾಡಲಾದ ವೆಚ್ಚ. | 18,47,299/- |
| | ಒಟ್ಟು: | **1,94,19,736/-** |
| 4. | ಸಾಲಗಳು ಮತ್ತು ಒಟ್ಟು ಆದಾಯ (ಕಳೆದಲ್ಲಿ) | **(-) 45,00,000/-** |
| | ಅಸಮತೋಲನ ಆಸ್ತಿ ರೂ. | **= 1,49,19,736/-**<br>**ಶೇಕಡಾ 331.54** |

ಭ್ರಷ್ಟಾಚಾರ ನಿಗ್ರಹ ದಳವು ಸರ್ಕಾರಕ್ಕೆ ಒದಗಿಸಿರುವ ಪ್ರಾಥಮಿಕ ವರದಿಯನುಸಾರ ಶ್ರೀ ಜಗನ್ನಾಥ ಮಜಗೆ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಔರಾದ್ (ಹಾಲಿ ಯೋಜನಾ ಉಪ ವಿಭಾಗ, ಬೀದರ್) ಇವರು ತಮ್ಮ ಬಲ್ಲ ಮೂಲಗಳಿಗಿಂತ ಹೆಚ್ಚಿನ ಚರ ಮತ್ತು ಸ್ಥಿರಾಸ್ತಿಗಳನ್ನು ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಸ್ಪಷ್ಟವಾಗಿ ಕಂಡು ಬಂದಿರುತ್ತದೆ. ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆ ಮತ್ತು ಪ್ರಾಮಾಣಿಕತೆ ತೋರದೆ ಅಪರಾಧಿಕ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಅಲ್ಲದೆ, ಸದರಿಯವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3 (1)ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುತ್ತಾರೆ.

ಸದರಿಯವರನ್ನು ಸೇವೆಯಲ್ಲಿ ಮುಂದುವರೆಸಿದಲ್ಲಿ ಹುದ್ದೆಯ ಪ್ರಭಾವವನ್ನು ಬಳಸಿ ತನಿಖೆಯಲ್ಲಿ ಹಸ್ತಕ್ಷೇಪ ಮಾಡುವ ಹಾಗೂ ಸಾಕ್ಷಿ ಪುರಾವೆಗಳನ್ನು ನಾಶಪಡಿಸುವ ಅಥವಾ ತಿರುಚುವ ಸಾಧ್ಯತೆ ಇರುವುದರಿಂದ ಕೂಡಲೇ ಸದರಿಯವರನ್ನು ಸೇವೆಯಿಂದ ಅಮಾನತ್ತುಪಡಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 150 ಇಎನ್‌ಕ್ಯೂ 2016, ಬೆಂಗಳೂರು, ದಿನಾಂಕ 20.12.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ಕಲಂ 13(1)(ಇ) ಸಹವಾಚನ 13(2) ರೀತ್ಯಾ ಬೀದರ್ ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್ ಠಾಣೆಯಲ್ಲಿ ದಾಖಲಾಗಿರುವ ಮೊಕದ್ದಮೆ ಸಂಖ್ಯೆ 02/2016ರ ಪ್ರಕರಣದಲ್ಲಿ ಭ್ರಷ್ಟಾಚಾರ ನಿಗ್ರಹ ದಳವು ಕೈಗೊಳ್ಳುವ ಕ್ರಮವನ್ನು ಬಾಕಿ ಇರಿಸಿ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 10(1)(ಎಎ) ರನ್ವಯ ಸರ್ಕಾರವು ಜಿಲ್ಲಾ ಪಂಚಾಯತ್ ಸೇವೆಗೆ ಸೇರಿದ ಶ್ರೀ ಜಗನ್ನಾಥ ಮಜಗೆ, ಯೋಜನಾ ಉಪ ವಿಭಾಗ, ಬೀದರ್ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿ ಆದೇಶಿಸಿದೆ.

ಅಮಾನತ್ತು ಅವಧಿಯಲ್ಲಿ ಸದರಿಯವರು ನಿಯಮಾನುಸಾರ ಜೀವನಾಧಾರ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮೋದನೆಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದಲ್ಲ.

ಶ್ರೀ ಜಗನ್ನಾಥ ಮಜಗೆ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ಲೀನ್‌ನನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಹೊನ್ನೂರುಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಅಪರ ಪೋಲೀಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
6. ಪೋಲೀಸ್ ಅಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ ಪೋಲೀಸ್‌ಠಾಣೆ, ಬೀದರ್.
7. ಸಂಬಂಧಪಟ್ಟ ಅಧಿಕಾರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೀದರ್ ಇವರ ಮುಖಾಂತರ.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ ಯವರಿಗೆ.
9. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ)/ ಇವರುಗಳ ಆಪ್ತ ಕಾರ್ಯದರ್ಶಿ /ಆಪ್ತ ಸಹಾಯಕರಿಗೆ.
10. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.